ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

## -:ಪತ್ರಿಕಾ ಪ್ರಕಟಣೆ:-

ಕೋವಿಡ್-2019 ಹಿನ್ನೆಲೆಯಲ್ಲಿ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯದ ಮಾರ್ಗಸೂಚಿ ದಿನಾಂಕ: 29.08.2020ರಲ್ಲಿ ಮಾರ್ಗಸೂಚಿಯಂತೆ ಕಂಟೈನ್ಮೆಂಟ್ ಜೋನ್ ಹೊರತುಪಡಿಸಿ 9ನೇ ತರಗತಿಯಿಂದ 12ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಶಾಲೆಯನ್ನು ದಿನಾಂಕ: 21.09.2020ರಿಂದ ತೆರೆದು ವಿದ್ಯಾರ್ಥಿಗಳು ಸಂದೇಹ ಪರಿಹಾರಕ್ಕಾಗಿ ಶಾಲೆಗಳಿಗೆ ಭೇಟಿ ನೀಡಬಹುದೆಂದು ಅನುಮತಿ ನೀಡಲಾಗಿದೆ. ಆದರೆ ಕರ್ನಾಟಕದಲ್ಲಿ ಕೋವಿಡ್-19 ಹಬ್ಬುತ್ತಿರುವ ಪ್ರಮಾಣ ಕಡಿಮೆಯಾಗದ ಹಿನ್ನೆಯಲ್ಲಿ ಸೆಪ್ಟಂಬರ್-2020ರ ಅಂತ್ಯದವರೆಗೆ ಶಾಲಾ ಕಾಲೇಜುಗಳಿಗೆ ಭೇಟಿ ನೀಡಲು, ಅನುಮತಿ ನೀಡದಿರಲು ಸೂಚಿಸಿ ದಿನಾಂಕ: 19.09.2020ರಲ್ಲಿ ಪತ್ರಿಕಾ ಪ್ರಕಟಣೆ ನೀಡಲಾಗಿತ್ತು.

ಈ ಸಂಬಂಧ ವಿವರವಾಗಿ ಪರಿಶೀಲಿಸಿದ ನಂತರ ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಹಂತದಲ್ಲಿಯೂ ಸಹ ಕೋವಿಡ್-19 ಹಬ್ಬುತ್ತಿರುವ ಪ್ರಮಾಣ ಕಡಿಮೆಯಾಗದ ಕಾರಣ ಈಗಿನ ಪರಿಸ್ಥಿತಿಯಲ್ಲಿ ಶಾಲೆಗಳಿಗೆ ವಿದ್ಯಾರ್ಥಿಗಳು ಬರುವುದು ಕ್ಷೇಮಕರವಲ್ಲ ಎಂದು ಅಭಿಪ್ರಾಯ ಪಡಲಾಗಿದೆ.

ಆದ ಕಾರಣ 15.10.2020 ರವರೆಗೆ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳನ್ನು ಶಾಲೆ/ಪದವಿಪೂರ್ವ ಕಾಲೇಜುಗಳಿಗೆ ಭೇಟಿ ನೀಡಲು ಅನುಮತಿ ನೀಡದಿರಲು ತೀರ್ಮಾನಿಸಲಾಗಿದೆ. ಪರಿಸ್ಥಿತಿಯ ಅವಲೋಕನೆಯ ನಂತರ ಮುಂದಿನ ತೀರ್ಮಾನವನ್ನು ತಿಳಿಸಲಾಗುವುದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು